ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 74 ಟಿಇಸಿ 2019

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:31-08-2019

ಇಂದ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ,

1) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.
2) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.

ಮಾನ್ಯರೇ,

ವಿಷಯ:- ಅಂತಿಮ ಸುತ್ತಿನ ನಂತರದಲ್ಲಿ ಖಾಲಿ ಉಳಯುವ ಸರ್ಕಾರಿ ಇಂಜನಿಯರಿಂಗ್ ಕಾಲೇಜುಗಳ ಸೀಟುಗಳನ್ನು ಭರ್ತಿ ಮಾಡುವ ಕುರಿತು.

ಉಲ್ಲೇಖ:- ಸಮಸಂಖ್ಯೆಯ ದಿನಾಂಕ:29.07.2019 ಮತ್ತು 14.08.2019ರ ಪತ್ರಗಳು

>>><<<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:28.05.2019ರ ಅಪರಾಹ್ನ 3.00ಗಂಟೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿರುವಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ, ಕೊನೆಯ ಹಂತದ ಸೀಟು ಹಂಚಿಕೆಯ ಪ್ರಕ್ರಿಯೆಯ ನಂತರದಲ್ಲಿ ಬಾಕಿ ಉಳಿದ ಸೀಟುಗಳ ವಿವರಗಳನ್ನು ಕಾಲೇಜುವಾರು ಮತ್ತು ಕೋರ್ಸ್‌ವಾರು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಹಾಗೂ ಕೊನೆಯ ಹಂತದ ಸೀಟು ಹಂಚಿಕೆ ಪ್ರಕ್ರಿಯೆ ನಂತರದಲ್ಲಿ ಬಾಕಿ ಉಳಿದ ಸೀಟುಗಳನ್ನು ಸರ್ಕಾರಿ ಇಂಜನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳ ಹಂತದಲ್ಲಿಯೇ ಪಾರದರ್ಶಕವಾಗಿ ಮತ್ತು ಮೆರಿಟ್ ಆಧಾರದ ಮೇಲೆ ಭರ್ತಿ ಮಾಡಿಕೊಂಡು, ಭರ್ತಿ ಮಾಡಿಕೊಂಡ ಅಭ್ಯರ್ಥಿಗಳ ವಿವರಗಳನ್ನು ಪರಿಶೀಲಿಸಿ, ದೃಢೀಕರಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಕಳುಹಿಸುವಂತೆ ಉಲ್ಲೇಖಿತ ದಿನಾಂಕ:29.07.2019ರ ಪತ್ರದಲ್ಲಿ ತಿಳಿಸಲಾಗಿತ್ತು. ತದನಂತರದಲ್ಲಿ 4ನೇ ಸುತ್ತಿನ ಸೀಟು ಹಂಚಿಕೆ ಪ್ರಕ್ರಿಯೆಯನ್ನು ಪ್ರಾಧಿಕಾರವು ನಡೆಸುತ್ತಿರುವುದರಿಂದ ಭರ್ತಿ ಪ್ರಕ್ರಿಯೆಯನ್ನು ಮಾಡದಿರುವಂತೆ ಉಲ್ಲೇಖಿತ ದಿನಾಂಕ:14.08.2019ರ ಪತ್ರದಲ್ಲಿ ತಿಳಿಸಲಾಗಿದೆ.

ಆದರೆ, ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಹಿನ್ನೆಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧೀಕಾರದಿಂದ ಹಂಚಿಕೆ ಮಾಡಿರುವ ಅಭ್ಯರ್ಥಿಗಳು ನಿಗಧಿತ ಅವಧಿಯಲ್ಲಿ ಪ್ರವೇಶಾತಿ ಹೊಂದದಿರುವುದರಿಂದ, ಕೆಲವು ಅಭ್ಯರ್ಥಿಗಳು ಖಾಲಿ ಉಳಿದಿರುವ ಸರ್ಕಾರಿ ಇಂಜನಿಯರಿಂಗ್ ಕಾಲೇಜುಗಳಲ್ಲಿನ ಸೀಟುಗಳನ್ನು ಪ್ರಾಂಶುಪಾಲರುಗಳ ಹಂತದಲ್ಲಿ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡುವಂತೆ ಕೋರಿ ಮನವಿಗಳನ್ನು ಸಲ್ಲಿಸಿರುತ್ತಾರೆ.

ಅಭ್ಯರ್ಥಿಗಳ ಉನ್ನತ ವ್ಯಾಸಂಗದ ಹಿತದೃಷ್ಟಿಯಿಂದ ಮತ್ತು ಆಗಸ್ಟ್ 2019ರ ಮಾಹೆಯಲ್ಲಿ ಅತಿವೃಷ್ಟಿಯಿಂದಾಗಿ ರಾಜ್ಯದ ಹಲವು ಭಾಗಗಳಲ್ಲಿ ಅತಂತ್ರ ಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕೊನೆಯ ಸುತ್ತಿನಲ್ಲಿ ಹಂಚಿಕೆಗೊಂಡು ಖಾಲಿ ಉಳಿದಿರುವ ಬಾಕಿ ಸೀಟುಗಳನ್ನು ಸರ್ಕಾರಿ ಇಂಜನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳ ಹಂತದಲ್ಲಿ ದಿನಾಂಕ:01/09/2019 ರಿಂದ 09/09/2019ರ ವರೆಗೆ ಸ್ಥಳೀಯ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ ಪಾರದರ್ಶಕವಾಗಿ ಮತ್ತು ಮೆರಿಟ್

ಆಧಾರದ ಮೇಲೆ ಭರ್ತಿ ಮಾಡಿಕೊಂಡು, ಭರ್ತಿ ಮಾಡಿಕೊಂಡ ಅಭ್ಯರ್ಥಿಗಳ ವಿವರಗಳನ್ನು ಪರಿಶೀಲಿಸಿ, ದೃಢೀಕರಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಕಳುಹಿಸುವಂತೆ ಸಂಬಂದಪಟ್ಟ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ನಿರ್ದೇಶಿಸುವಂತೆ ತಿಳಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ

31/8/19

(ಮನೋರಮ ಡಿ.ಸಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ತಾಂತ್ರಿಕ)

ಪ್ರತಿ:

1) ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನ ಸಂಗಮ, ಬೆಳಗಾಂ
2) ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರುಗಳಿಗೆ – ನಿರ್ದೇಶನಾಲಯದ ಮುಖಾಂತರ ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ನಿರ್ದೇಶನ ನೀಡುವಂತೆ ಕೋರಿದೆ.